ಜಿಲ್ಲಾಧಿಕಾರಿಗಳ ಹಾಗೂ
ಜಿಲ್ಲಾ ದಂಡಾಧಿಕಾರಿಗಳ ಕಾರ್ಯಾಲಯ
ಕೊಡಗು ಜಿಲ್ಲೆ, ಮಡಿಕೇರಿ-571201

ಕರ್ನಾಟಕ ಸರ್ಕಾರ

ಕಛೇರಿ: 08272-225500
ನಿವಾಸ: 08272-225700
ಫ್ಯಾಕ್ಸ್: 08272-225900
ಈ-ಮೇಲ್:deo.kodagu@gmail.com
ವೆಬ್ ಸೈಟ್: http://www.kodagu.nic.in

---

ಸಂಖ್ಯೆ:ಪ್ರ.ವಿ./ 4 /2018-19 ದಿನಾಂಕ: 28-08-2018

## ಅಧಿಕೃತ ಜ್ಞಾಪನ

ವಿಷಯ: ಕೊಡಗು ಜಿಲ್ಲೆಯ ಪ್ರಕೃತಿ ವಿಕೋಪ ಪರಿಹಾರ ಕಾರ್ಯ ಸಂಬಂಧ ಪರಿಹಾರ ಕೇಂದ್ರಗಳಲ್ಲಿರುವ ಸಂತ್ರಸ್ಥರ ವಿವರ ಸಂಗ್ರಹಿಸುವ ಕುರಿತು.

ಉಲ್ಲೇಖ: ಜಿಲ್ಲಾಧಿಕಾರಿಯವರು, ಹಾಸನ ಜಿಲ್ಲೆ, ಹಾಸನ ರವರ ಅಧಿಕೃತ ಜ್ಞಾಪನ ಸಂಖ್ಯೆ: ಸಿಬ್ಬಂದಿ(1)/ಸಿಆರ್/114/2018-19 ದಿನಾಂಕ 27.08.2018

----------

ಕೊಡಗು ಜಿಲ್ಲೆಯಲ್ಲಿ ಭಾರೀ ಗಾಳಿ ಮಳೆಯಿಂದ ಮಡಿಕೇರಿ ನಗರದ ಸುತ್ತಮುತ್ತ ಹಾಗೂ ಜಿಲ್ಲೆಯ ಹಲವೆಡೆ ಜಲಾವೃತ ಮತ್ತು ಭೂಕುಸಿತದಿಂದ ಮಾನವ/ ಜಾನುವಾರು ಜೀವಹಾನಿ, ಮನೆಹಾನಿ, ರಸ್ತೆಹಾನಿ ಸೇರಿದಂತೆ ಹಲವು ನಷ್ಟಗಳು ಆಗಿರುತ್ತದೆ. ಪ್ರಸ್ತುತ ಪರಿಹಾರ ವಿತರಣೆ, ಮೂಲ ಸೌಲಭ್ಯ ಕಲ್ಪಿಸುವಿಕೆ / ಪುನರ್ ನಿರ್ಮಾಣ ಕಾರ್ಯ ಪ್ರಗತಿಯಲ್ಲಿರುತ್ತದೆ.

ಜಿಲ್ಲಾಧಿಕಾರಿ, ಹಾಸನ ಜಿಲ್ಲೆ, ಹಾಸನ ರವರು ಉಲ್ಲೇಖದ ಅಧಿಕೃತ ಜ್ಞಾಪನದಂತೆ ಕೊಡಗು ಜಿಲ್ಲೆಗೆ ತುರ್ತು ಪರಿಹಾರ ಕಾರ್ಯಕ್ಕಾಗಿ ನಿಯೋಜಿಸಿರುವ ಅಧಿಕಾರಿ/ಸಿಬ್ಬಂದಿಗಳನ್ನು ಜಿಲ್ಲೆಯಲ್ಲಿರುವ ಪರಿಹಾರ ಕೇಂದ್ರಗಳಲ್ಲಿರುವ ಸಂತ್ರಸ್ಥರ ವಿವರವನ್ನು ನಿಗಧಿತ ನಮೂನೆಯಂತೆ ಸಂಗ್ರಹಿಸಲು ತಾತ್ಕಾಲಿಕವಾಗಿ ನಿಯೋಜಿಸಿದೆ.

ಅತಿವೃಷ್ಠಿಯಿಂದ ತೀವ್ರ ಹಾನಿಗೆ ಒಳಗಾಗಿರುವ ಕೊಡಗು ಜಿಲ್ಲೆ ಸೋಮವಾರಪೇಟೆ ತಾಲ್ಲೂಕಿನ ಸುಂಟಿಕೊಪ್ಪ ಮತ್ತು ಕುಶಾಲನಗರ ಹೋಬಳಿಗಳಲ್ಲಿ ಆಗಿರುವ ನಷ್ಟದ ಬಗ್ಗೆ ಸಮೀಕ್ಷೆ ನಡೆಸಲು ಜಿಲ್ಲೆಯ ಅಧಿಕಾರಿ / ಸಿಬ್ಬಂದಿಗಳನ್ನು ಮತ್ತು ನೆರೆಯ ಜಿಲ್ಲೆಗಳಿಂದ ನಿಯೋಜಿತ ಅಧಿಕಾರಿ / ಸಿಬ್ಬಂದಿಗಳನ್ನು **"ಅನುಬಂಧ-ಆ"** ದಂತೆ ತಂಡಗಳನ್ನು ರಚಿಸಿ ಆದೇಶಿಸಿದೆ.

**"ಅನುಬಂಧ-ಆ"** ದಂತೆ ರಚಿಸಲಾಗಿರುವ ತಂಡಗಳ ನಿಯೋಜಿತ ಅಧಿಕಾರಿ / ಸಿಬ್ಬಂದಿಗಳು ಕೂಡಲೇ ಸಂಬಂಧಪಟ್ಟ ತಾಲ್ಲೂಕು ತಹಶೀಲ್ದಾರರ ಬಳಿ ವರದಿ ಮಾಡಿಕೊಂಡು, ಕಂದಾಯ ಪರಿವೀಕ್ಷಕರೊಂದಿಗೆ ಸಮನ್ವಯತೆಯಿಂದ ಕಾರ್ಯನಿರ್ವಹಿಸುವುದು. **ನಿಗಧಿತ ನಮೂನೆಯಂತೆ ಮಾಹಿತಿಯನ್ನು ಭರ್ತಿಗೊಳಿಸಿ, ಸ್ಥಳೀಯ ಕಾರ್ಯಕ್ಷೇತ್ರದ ಗ್ರಾಮಲೆಕ್ಕಾಧಿಕಾರಿ ಮತ್ತು ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಜಂಟಿ ಸಹಿ ಹಾಗೂ ತಹಶೀಲ್ದಾರರ ಮೇಲು ರುಜುವಿನೊಂದಿಗೆ ದಿನಾಂಕ 31.08.2018ರ ಒಳಗಾಗಿ ಜಿಲ್ಲಾಧಿಕಾರಿಗಳ ಕಚೇರಿಗೆ ಸಲ್ಲಿಸಲು ಸೂಚಿಸಿದೆ.**

ಜಿಲ್ಲಾಧಿಕಾರಿ,
ಕೊಡಗು ಜಿಲ್ಲೆ, ಮಡಿಕೇರಿ.

ಪ್ರತಿಯನ್ನು:
1. ಉಪ ವಿಭಾಗಾಧಿಕಾರಿ, ಮಡಿಕೇರಿ ಉಪ ವಿಭಾಗ, ಮಡಿಕೇರಿ ಇವರಿಗೆ.
2. ತಹಶೀಲ್ದಾರರು, ಸೋಮವಾರಪೇಟೆ ತಾಲ್ಲೂಕು, ಸೋಮವಾರಪೇಟೆ ಇವರಿಗೆ.
3. ಸಂಬಂಧಪಟ್ಟ ಎಲ್ಲಾ ಅಧಿಕಾರಿ / ಸಿಬ್ಬಂದಿಗಳಿಗೆ